ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢಶಾಲೆಗಳಲ್ಲಿ ಮೂಲಭೂತ ಸೌಕರ್ಯಗಳ ಕೊರತೆ

296(553); ಶ್ರೀ ಬಾಲಕೃಷ್ಣ ಸಿ.ಎನ್. (ಶ್ರವಣಬೆಳಗೊಳ)

ಅ) ಹಾಸನ ಜಿಲ್ಲೆಯಲ್ಲಿರುವ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢಶಾಲೆಗಳ ಪೈಕಿ ಎಷ್ಟು ಶಾಲೆಗಳು ಮೂಲಭೂತ ಸೌಕರ್ಯಗಳ ಕೊರತೆಯನ್ನು ಎದುರಿಸುತ್ತಿವೆ; (ತಾಲ್ಲೂಕುವಾರು ವಿವರ ನೀಡುವುದು)

ಆ) ಶಾಲೆಗಳಲ್ಲಿ ಶೌಚಾಲಯ, ಕುಡಿಯುವ ನೀರಿನ ವ್ಯವಸ್ಥೆಗಳಿಲ್ಲದ ಕಾರಣ ವಿದ್ಯಾರ್ಥಿಗಳು ಗಂಭೀರ ಸಮಸ್ಯೆಗಳನ್ನು ಎದುರಿಸುತ್ತಿರುವುದು ಹಾಗೂ ವಿದ್ಯಾರ್ಥಿಗಳು ವಿದ್ಯಾಭ್ಯಾಸವನ್ನೇ ಬಿಟ್ಟು ಹೋಗುವ ಪರಿಸ್ಥಿತಿಗೆ ತಲುಪುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ, ಮೂಲಭೂತ ಸೌಲಭ್ಯಗಳನ್ನು ಕಲ್ಪಿಸಲು ಸರ್ಕಾರ ಕೈಗೊಳ್ಳಲಿರುವ ಪರಿಣಾಮಕಾರಿ ಕ್ರಮಗಳೇನು;

ಇ) ಸರ್ಕಾರಿ ಶಾಲೆಗಳಿಗೆ ಪರಿಪೂರ್ಣ ಪ್ರಮಾಣದಲ್ಲಿ ಮೂಲಭೂತ ಸೌಕರ್ಯಗಳನ್ನು ಒದಗಿಸಿಕೊಡಲು ಸರ್ಕಾರ ಕಾಲಮಿತಿ ಯೋಜನೆಗಳನ್ನು ಅನುಷ್ಠಾನಗೊಳಿಸಿದೆಯೇ.?

ಶ್ರೀ ಕಿಮ್ಮನೆ ರತ್ನಾಕರ್ (ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು)

ಅ)

ಕ್ರ ಸಂ	ವಲಯ	ಒಟ್ಟು ಶಾಲೆಗಳು	ಶೌಚಾಲಯ		ಕುಡಿಯುವ ನೀರು	
1	ಆಲೂರು	180	180	0	180	0
2	ಅರಕಲಗೂಡು	320	320	0	320	0
3	ಅರಸೀಕೆರೆ	420	420	0	420	0
4	ಬೇಲೂರು	323	323	0	323	0
5	ಸಿ.ಆರ್.ಪಟ್ಟಣ	417	417	0	417	0
6	ಹಾಸನ	406	406	0	406	0

7	ಹೊಳೆನರಸೀಪುರ	264	264	0	264	0
	ನಕಲೇಶಪುರ	184	184	0	184	0
ಒಟ್ಟು		**2514**	**2514**	**0**	**2514**	**0**

ಎಸ್ ಎಸ್ ಎ ಯೋಜನೆಯಡಿಯಲ್ಲಿ ಕುಡಿಯುವ ನೀರು ಮತ್ತು ಶೌಚಾಲಯ ಸೌಕರ್ಯಗಳನ್ನು ಈ ಮೇಲಿನ ಎಲ್ಲಾ ಶಾಲೆಗಳಿಗೂ ಒದಗಿಸಲಾಗಿದೆ.

ಆ) ಎಸ್.ಎಸ್.ಎ ಯೋಜನೆಯಡಿಯಲ್ಲಿ ಜಿಲ್ಲೆಯ ಎಲ್ಲಾ ಸರ್ಕಾರಿ ಪ್ರಾಥಮಿಕ ಶಾಲೆಗಳಿಗೂ ಮೂಲಭೂತ ಸೌಲಭ್ಯಗಳನ್ನು ಈಗಾಗಲೇ ಹಂತ ಹಂತವಾಗಿ ಎಲ್ಲಾ ಶಾಲೆಗಳಿಗೂ ಕಲ್ಪಿಸಲಾಗಿದ್ದು, ವಿದ್ಯಾರ್ಥಿಗಳು ಅದನ್ನು ಬಳಸಿಕೊಳ್ಳುತ್ತಿದ್ದಾರೆ.

ಇ) ಎಸ್.ಎಸ್.ಎ ಯೋಜನೆಯಡಿಯಲ್ಲಿ ಕಾಲಮಿತಿ ಯೋಜನೆಯ ಒಳಗೆ ಹಂತ ಹಂತವಾಗಿ 2009–10, 2010–11, 2011–12 ಮತ್ತು 2012–13ನೇ ಸಾಲಿನಲ್ಲಿ ಸರ್ಕಾರಿ ಪ್ರಾಥಮಿಕ ಶಾಲೆಗಳಿಗೆ ಅನುಷ್ಠಾನಗೊಳಿಸಲಾಗಿದೆ.

ಹಾಸನದಲ್ಲಿ ವಿಮಾನ ನಿಲ್ದಾಣ ನಿರ್ಮಾಣ

369(609); ಶ್ರೀ ಪ್ರಕಾಶ್ ಹೆಚ್ ಎಸ್. (ಹಾಸನ)

ಅ) ಹಾಸನ ನಗರದಲ್ಲಿ ವಿಮಾನ ನಿಲ್ದಾಣಕ್ಕಾಗಿ ಕೇಂದ್ರ ಸರ್ಕಾರ ಅನುಮೋದನೆ ನೀಡಿ, ಭೂ ಸ್ವಾಧೀನ ಪ್ರಕ್ರಿಯೆಯು ಮುಗಿದಿದ್ದರೂ ಇದುವರೆವಿಗೂ ಕಾಮಗಾರಿಗಳು ಪ್ರಾರಂಭವಾಗದಿರಲು ಕಾರಣಗಳೇನು (ಸಂಪೂರ್ಣ ಮಾಹಿತಿ ನೀಡುವುದು)?

ಶ್ರೀ ಎಸ್.ಆರ್. ಪಾಟೀಲ್ (ಯೋಜನೆ ಮತ್ತು ಸಾಂಖ್ಯಿಕ ಹಾಗೂ ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು)